# All India Radio: Bangalore
# Regional Bulletin In Kannada
# 15.04.2026 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ರಾಸಾಯನಿಕ ಮುಕ್ತ ಕೃಷಿಗೆ ಆಸಕ್ತಿ ವಹಿಸಬೇಕು; ದೇಶದ ರೈತರಿಗೆ ಪ್ರಧಾನಿ ನರೇಂದ್ರ ಮೋದಿ ಕರೆ
2. ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದಿಂದ ಸಮ ಸಮಾಜ ನಿರ್ಮಾಣ ಸಾಧ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ
3. ಇದೇ ೧೭ರಂದು ನವದೆಹಲಿಯಲ್ಲಿ ಬ್ರಿಡ್ಜ್-೨ ಬೆಂಗಳೂರು-೨೦೨೬ ರಾಜತಾಂತ್ರಿಕರ ಜೊತೆ ಸಮಾಲೋಚನೆ - ಪ್ರಿಯಾಂಕ್ ಖರ್ಗೆ
4. ಮೈಸೂರು ಬಳಿ ಡಾ.ಬಿ.ಆರ್.ಅಂಬೇಡ್ಕರ್ ಥೀಮ್ ಪಾರ್ಕ್ ನಿರ್ಮಾಣ - ಡಾ. ಎಚ್.ಸಿ. ಮಹದೇವಪ್ಪ

<><><><>

ರಾಸಾಯನಿಕ ಮುಕ್ತ ಕೃಷಿಗೆ ದೇಶದ ರೈತರು ಆಸಕ್ತಿ ವಹಿಸಬೇಕು. ಇದು ವಿಕಸಿತ ಭಾರತ ಮತ್ತು ವಿಕಸಿತ ಕರ್ನಾಟಕಕ್ಕೆ ಸಹಕಾರಿಯಾಗುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಆದಿಚುಂಚನಗಿರಿಯಲ್ಲಿ ೮೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ದ್ರಾವಿಡ ಶೈಲಿಯ ನೂತನ ಭೈರವೈಕ್ಯ ಮಂದಿರವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ವಿಕಸಿತ ಭಾರತ ಕನಸು ನನಸಾಗಿಸಲು ೯ ಅಭಿವೃದ್ಧಿ ಕ್ಷೇತ್ರಗಳಲ್ಲಿ ಪ್ರಾಮಾಣಿಕವಾಗಿ ನಾಡಿನ ಜನತೆ ತೊಡಗಿಸಿಕೊಳ್ಳುವಂತೆ ಕರೆ ನೀಡಿದರು. ಜಲ ಸಂರಕ್ಷಣೆ ಮತ್ತು ನಿರ್ವಹಣೆ, ಏಕ್ ಪೇಡ್ ಮಾ ಕೆ ನಾಮ್ ಕಾರ್ಯಕ್ರಮದಡಿಯಲ್ಲಿ ಮರಗಳನ್ನು ನೆಡುವುದು ಮತ್ತು ಸುತ್ತಮುತ್ತಲಿನ ಪ್ರದೇಶಗಳು, ಧಾರ್ಮಿಕ ಸ್ಥಳಗಳು, ಹಳ್ಳಿಗಳು ಮತ್ತು ನಗರಗಳನ್ನು ಸ್ವಚ್ಛವಾಗಿಡಲು ನಾಗರಿಕರು ಕೈಜೋಡಿಸುವಂತೆ ಪ್ರಧಾನಿ ಹೇಳಿದರು. ದೇಸಿ ಸರಕುಗಳು ಮತ್ತು ಉದ್ಯಮಿಗಳನ್ನು ಪ್ರೋತ್ಸಾಹಿಸುವ ಮೂಲಕ ಸ್ವದೇಶಿ ಚಳುವಳಿಯನ್ನು ಪ್ರೋತ್ಸಾಹಿಸುವಂತೆ ಪ್ರಧಾನಿ ಕರೆ ನೀಡಿದರು. ದೇಶದ ಕೆಲವು ಭಾಗಗಳಿಗೆ ಭೇಟಿ ನೀಡುವ ಭಾರತೀಯರು ಪ್ರವಾಸೋದ್ಯಮವನ್ನು ಪ್ರೋತ್ಸಾಹಿಸಬೇಕು. ರಾಸಾಯನಿಕಗಳು ಮತ್ತು ಕೀಟನಾಶಕಗಳನ್ನು ತಪ್ಪಿಸುವ ಮೂಲಕ ಸಾವಯವ ಮತ್ತು ನೈಸರ್ಗಿಕ ಕೃಷಿಗೆ ಆದ್ಯತೆ ನೀಡಬೇಕು ಎಂದರು. ಸ್ಥೂಲಕಾಯ ತಪ್ಪಿಸಲು ರಾಗಿ ಮತ್ತು ಕಡಿಮೆ ಖಾದ್ಯ ಎಣ್ಣೆ ಬಳಸಬೇಕು. ಯೋಗ, ಕ್ರೀಡೆ ಮತ್ತು ಫಿಟ್‌ನೆಸ್ ನಮ್ಮ ದೈನಂದಿನ ಜೀವನದ ಭಾಗವಾಗಿರಬೇಕು ಎಂದು ಕಿವಿಮಾತು ಹೇಳಿದರು.

ಬಡವರು ಮತ್ತು ಹಿಂದುಳಿದ ವರ್ಗಗಳ ಬಗ್ಗೆ ಸೇವಾ ಭಾವನೆ ಹೊಂದಿರಬೇಕು. ಈ ಒಂಬತ್ತು ಧ್ಯೇಯಗಳನ್ನು ಅನುಸರಿಸಿದರೆ ನಮ್ಮ ದೇಶ ಶೀಘ್ರದಲ್ಲೇ ಅಭಿವೃದ್ಧಿ ಹೊಂದಿದ ದೇಶವಾಗಿ ಹೊರಹೊಮ್ಮಲಿದೆ ಎಂದು ಹೇಳಿದರು. ಇದಕ್ಕೂ ಮುನ್ನ ಮಠದ ಗೋರಕ್ಷಕನಾಥ ತಪಸ್ಸು ಮಾಡಿದ ಜ್ವಾಲಪೀಠಕ್ಕೆ ಭೇಟಿ ನೀಡಿದ ಪ್ರಧಾನಿ, ಕಾಲಭೈರವೇಶ್ವರನ ದರ್ಶನ ಪಡೆದು, ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ಸೌಂದರ್ಯ ಲಹರಿ ಮತ್ತು ಶಿವಸ್ತೋತ್ರ ಬಿಡುಗಡೆ ಮಾಡಿದರು. ಇದೇ ವೇಳೆ ಮಾತನಾಡಿದ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ, ಶಿಕ್ಷಣ, ಆರೋಗ್ಯ ಮತ್ತು ಸಮಾಜ ಸೇವೆಯಲ್ಲಿ ಆದಿಚುಂಚನಗಿರಿ ಮಠ ಅನನ್ಯ ಪಾತ್ರ ವಹಿಸುತ್ತಿವೆ. ಡಾ. ಬಾಲಗಂಗಾಧರನಾಥ ಸ್ವಾಮೀಜಿ, ಅಸಂಖ್ಯಾತ

ಬಡಮಕ್ಕಳ ಹೃದಯಗಳಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ ಎಂದರು. ನಗರಗಳಿಗೆ ಮಾತ್ರ ಸೀಮಿತವಾಗಿದ್ದ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಹಳ್ಳಿಗಳಿಗೂ ವಿಸ್ತರಿಸಿದ ಬಾಲಗಂಗಾಧರನಾಥ ಸ್ವಾಮೀಜಿ, ಸುಮಾರು ೫ ಕೋಟಿ ಸಸಿಗಳನ್ನು ಬೆಳೆಸುವ ಮೂಲಕ ಪರಿಸರ ಕ್ಷೇತ್ರದಲ್ಲಿಯೂ ಗಮನಾರ್ಹ ಕೊಡುಗೆ ನೀಡಿದ್ದಾರೆ ಎಂದರು. ಈ ಸಂದರ್ಭದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ನಿರ್ಮಲಾನಂದನಾಥ ಸ್ವಾಮೀಜಿ, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ. ಕೃಷಿ ಸಚಿವ ಚಲುವರಾಯಸ್ವಾಮಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

<><><><>

ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದಿಂದ ಸಮ ಸಮಾಜ ನಿರ್ಮಾಣ ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ವಿಧಾನಸೌಧದ ಬ್ಯಾಂಕ್ವೆಟ್‌ಹಾಲ್‌ನಲ್ಲಿಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಆಯೋಜಿಸಿದ್ದ ಕನ್ನಡ ಸಾಮರಸ್ಯ ನೆಲೆಗಳು: ಕೃತಿಗಳನ್ನು ಲೋಕಾರ್ಪಣೆಗೊಳಿಸಿ, ಮಾತನಾಡಿದ ಅವರು, ವೈಚಾರಿಕತೆ, ವೈಜ್ಞಾನಿಕತೆ ಹಾಗೂ ಮಾನವೀಯತೆ ಗುಣಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ಕನ್ನಡ ಸಾಮರಸ್ಯ ನೆಲೆ ಯೋಜನೆಯಡಿ ನೂರು ಪುಸ್ತಕಗಳನ್ನು ಹೊರತರಲು ಉದ್ದೇಶಿಸಿದ್ದು, ಉಳಿದ ೫೯ ಪುಸ್ತಕಗಳು ಸಹ ಶೀಘ್ರ ಬಿಡುಗಡೆಯಾಗಲಿದೆ. ಯುವಕರಲ್ಲಿ ಮಾನವೀಯತೆ ಹೆಚ್ಚಾಗಬೇಕೆನ್ನುವ ನಿಟ್ಟಿನಲ್ಲಿ ಇಂದು ಬಿಡುಗಡೆಯಾಗಿರುವ ಪುಸ್ತಕಗಳು ಪ್ರಯೋಜನಕಾರಿಯಾಗಲಿದೆ ಎಂದು ಅವರು ಹೇಳಿದರು.

<><><><>

ರಾಜ್ಯ ಸರ್ಕಾರವು ಇದೇ ೧೭ರಂದು ನವದೆಹಲಿಯಲ್ಲಿ ಬ್ರಿಡ್ಜ್-೨ ಬೆಂಗಳೂರು-೨೦೨೬ ರಾಜತಾಂತ್ರಿಕರ ಜೊತೆ ಸಮಾಲೋಚನೆ ಕಾರ್ಯಕ್ರಮ ಆಯೋಜಿಸಿದ್ದು, ಈ ಸಮ್ಮೇಳನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉದ್ಯಮಿ ಕಿರಣ್ ಮಜುಂದಾರ್ ಶಾ ಭಾಗವಹಿಸಲಿದ್ದಾರೆ ಎಂದು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.  ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಬರುವ ನವೆಂಬರ್ ೧೭ರಿಂದ ೧೯ರ ವರೆಗೆ ನಡೆಯಲಿರುವ ಬೆಂಗಳೂರು ಟೆಕ್ ಸಮಿಟ್‌ಗೆ ಪೂರ್ವಭಾವಿಯಾಗಿ ಈ ಸಮಾವೇಶ ನಡೆಯುತ್ತಿದ್ದು, ರಾಜ್ಯಕ್ಕೆ ಸುಮಾರು ೫ ಸಾವಿರದ ೫೦೦ ಕೋಟಿ ರೂಪಾಯಿ ಮೊತ್ತದ ಜಾಗತಿಕ ಬಂಡವಾಳ ಹರಿದುಬರಲಿದ್ದು, ಸುಮಾರು ೭ ಸಾವಿರದ ೨೦೦ ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದರು. ಜಾಗತಿಕ ನಾವೀನ್ಯತಾ ಮೈತ್ರಿಕೂಟದ ನೆರವಿನೊಂದಿಗೆ ರಾಜ್ಯ ಸರ್ಕಾರ ಮತ್ತಷ್ಟು ಮಾರ್ಗಗಳನ್ನು ಸೃಷ್ಟಿಸುತ್ತಿದ್ದು, ರಾಜ್ಯದ ಕಂಪನಿಗಳಿಗೆ ಜಾಗತಿಕ ಮಾರುಕಟ್ಟೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದೆ ಎಂದು ಸಚಿವರು ತಿಳಿಸಿದರು. ಡೀಪ್‌ಟೆಕ್, ಫಿನ್‌ಟೆಕ್, ಹೆಲ್ತ್‌ಟೆಕ್, ಕ್ಲೀನ್‌ಟೆಕ್ ಬಯೋಟೆಕ್ ಮತ್ತು ಟ್ರಾವೆಲ್ ಟೆಕ್ ಕ್ಷೇತ್ರಗಳಲ್ಲಿ ಜಾಗತಿಕ ಹೂಡಿಕೆದಾರರು ಕಾರ್ಪೊರೇಟ್ ಸಂಸ್ಥೆಗಳು ಮತ್ತು ನಿಯಂತ್ರಣ ಸಂಸ್ಥೆಗಳ ಜೊತೆ ಸಂಪರ್ಕ ಸಾಧಿಸಿ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಬಲ ಸಂಪರ್ಕ ಸೇತುವೆ ಕಲ್ಪಿಸಲು ಈ ಸಮಾವೇಶ ನೆರವಾಗಲಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದರು.

<><><><>

ಮೈಸೂರು ತಾಲೂಕಿನ ಇಲವಾಲ ಹೋಬಳಿಯಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಹೋರಾಟ, ಸಾಧನೆ, ರಾಜತಾಂತ್ರಿಕತೆ ಮತ್ತು ತತ್ವಗಳನ್ನು ತಿಳಿಸಲು ಥೀಮ್ ಪಾರ್ಕ್ ನಿರ್ಮಾಣ ಮಾಡಲಾಗುವುದು ಎಂದು ಸಮಾಜ ಕಲ್ಯಾಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ. ಮಹದೇವಪ್ಪ ಅವರು ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಡಾ.ಬಿ.ಆರ್.ಅಂಬೇಡ್ಕರ್ ಥೀಮ್ ಪಾರ್ಕ್ ನಿರ್ಮಾಣ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಡನೆ ಸಭೆ ನಡೆಸಿ ಮಾತನಾಡಿದ ಅವರು, ಥೀಮ್ ಪಾರ್ಕ್ ಅಥವಾ

ಮ್ಯೂಸಿಯಂ ನಿರ್ಮಾಣ ಮಾಡಲು ೧೦ ಎಕರೆ ಭೂಮಿಯನ್ನು ಕಾಯ್ದಿರಿಸಲಾಗಿದೆ. ವಿಸ್ತೃತ ಯೋಜನಾ ವರದಿ ತಯಾರಿಸಿ ಮ್ಯೂಸಿಯಂ ನಿರ್ಮಾಣಕ್ಕೆ ಬೇಕಿರುವ ಅನುದಾನದೊಂದಿಗೆ ಯೋಜನೆ ಸಿದ್ಧವಾಗಬೇಕು ಎಂದರು. ಮೈಸೂರು ಐತಿಹಾಸಿಕ ಪ್ರವಾಸಿ ತಾಣವಾಗಿದ್ದು, ಥೀಮ್ ಪಾರ್ಕ್ ಹೆಚ್ಚಿನ ಜನರನ್ನು ಆಕರ್ಷಿಸುವುದರ ಜೊತೆಗೆ ಹೊಸತನದಿಂದ ಕೂಡಿರುವಂತೆ ಅಧಿಕಾರಿಗಳಿಗೆ ಸೂಚಿಸಿದರು.

<><><><>

ಮಂಗಳೂರು ನಗರ ದಕ್ಷಿಣ ಹಾಗೂ ಉತ್ತರ ಕ್ಷೇತ್ರದಲ್ಲಿ ಭೂಗತ ವಿದ್ಯುತ್ ಕೇಬಲ್ ಅಳವಡಿಕೆಗೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಶೀಘ್ರ ಕೆಲಸ ಆರಂಭವಾಗಲಿದೆ ಎಂದು ರಾಜ್ಯ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಳ್ಳಾಲ ನಗರಸಭೆ ವ್ಯಾಪ್ತಿ, ಸೋಮೇಶ್ವರ ಪುರಸಭೆ ಸೋಮೇಶ್ವರ, ಕುಂಪಲ, ಕೊಲ್ಯ, ಉಚ್ಚಿಲ ಭಾಗದಲ್ಲಿ ೧೮೬ ಕೋಟಿ ೪೫ ಲಕ್ಷ ರೂಪಾಯಿ ವೆಚ್ಚದಲ್ಲಿ ಭೂಗತ ಕೇಬಲ್ ಅಳವಡಿಕೆ ಕಾರ್ಯ ನಡೆಯಲಿದೆ ಎಂದರು.

<><><><>

ಬೇಸಿಗೆ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲೆಯಲ್ಲಿ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು ಎಂದು ವಿಧಾನಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿಸಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದ ಅವರು, ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳನ್ನು ಗುರುತಿಸಿ, ತುರ್ತಾಗಿ ಪರಿಹರಿಸಬೇಕು ಎಂದು ತಿಳಿಸಿದರು.

<><><><>

ಮಹಿಳೆಯರ ಸಬಲೀಕರಣ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಉದ್ದೇಶಿತ ಶೇಕಡ ೩೩ರಷ್ಟು ಮೀಸಲಾತಿ ಒದಗಿಸುವ ನಾರಿಶಕ್ತಿ ವಂದನ್ ಕಾಯ್ದೆ ಮಹತ್ವದ್ದಾಗಿದೆ ಎಂದು ಬಿಜೆಪಿ ರಾಜ್ಯ ಮಹಿಳಾ ಮೋರ್ಚಾದ ಉಪಾಧ್ಯಕ್ಷೆ ಡಾ. ವಿಜಯಲಕ್ಷ್ಮಿ ತುಂಗಳ ಹೇಳಿದ್ದಾರೆ. ಬಾಗಲಕೋಟೆಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಈ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದು, ನಾಳೆಯಿಂದ ಮೂರು ದಿನಗಳ ಕಾಲ ಲೋಕಸಭೆಯಲ್ಲಿ ವಿಶೇಷ ಚರ್ಚೆ ನಡೆಯುತ್ತಿರುವುದು ಸ್ವಾಗತಾರ್ಹ ಎಂದರು.

****ಧ್ವನಿ**** ಡಾ. ವಿಜಯಲಕ್ಷ್ಮಿ

ಈ ಮಧ್ಯೆ, ನಾರಿ ಶಕ್ತಿ ವಂದನೆ ಅಧಿನಿಯಮದ ಚರ್ಚೆಗೆ ಮುಂದಾಗಿರುವ ಕೇಂದ್ರ ಸರ್ಕಾರದ ಕ್ರಮವನ್ನು ಗದಗ ಜಿಲ್ಲಾ ಬಿಜೆಪಿಯ ಮಹಿಳಾ ಮೋರ್ಚಾ ಅಧ್ಯಕ್ಷೆ ನಿರ್ಮಲಾ ಕೊಳ್ಳಿ ಸ್ವಾಗತಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>